ಅಧ್ಯಕ್ಷರು:– ಆ ವಿಷಯ ನನಗೆ ಗೊತ್ತಿಲ್ಲ. ಈಗ ಪ್ರಶ್ನೆಗಳ ಕಾಲ ಮುಗಿಯಿತು. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

(ದಿನದ ಪಟ್ಟಿಯಲ್ಲಿ ಸೇರಿಸಲಾದ ಪ್ರಶ್ನೋತ್ತರಗಳು)

ಜಿಲ್ಲಾ ಪರಿಷತ್ತುಗಳ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ವಾಪಸ್ಸು ತೆಗೆದುಕೊಳ್ಳುವುದು.

366 ಶ್ರೀ ಕೆ.ಹೆಚ್. ಕುರಡಗಿ (ಮುಂಡರಗಿ)– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲಾ ಪರಿಷತ್ತಿನ ರಸ್ತೆಗಳು ಪೂರ್ಣ ಸಾದುರಸ್ಥಿಯಾಗಿದ್ದು, ಇವುಗಳನ್ನು ಪುನಃ ಜಿಲ್ಲಾ ಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆಯ ಅಧಿಕಾರ ವ್ಯಾಪ್ತಿಗೆ ತೆಗೆದುಕೊಳ್ಳುವ ವಿಚಾರ ಸರ್ಕಾರಕ್ಕೆ ಇದೆಯೇ?

ಶ್ರೀ ಎಸ್. ಬಂಗಾರಪ್ಪ, (ಮುಖ್ಯಮಂತ್ರಿಗಳು):–

ಅ) ಧಾರವಾಡ ಜಿಲ್ಲಾ ಪರಿಷತ್ತಿನ ಅಧೀನದಲ್ಲಿರುವ ಕೆಲವು ಗ್ರಾಮೀಣ ರಸ್ತೆಗಳನ್ನು ಹಾಗೂ ಇತರ ಜಿಲ್ಲಾ ರಸ್ತೆಗಳನ್ನು, ಮುಖ್ಯ ಜಿಲ್ಲಾ ರಸ್ತೆಗಳಾಗಿ ಮೇಲ್ದರ್ಜೆಗೇರಿಸಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳುವ ಪ್ರಸ್ತಾವನೆ ಇದೆ.

ಶ್ರೀ ಜಿ. ಪುಟ್ಟಸ್ವಾಮಿಗೌಡ: ಸನ್ಮಾನ್ಯ ಅಧ್ಯಕ್ಷರೇ, ಲಿಖಿತ ಮೂಲಕ ಉತ್ತರಿಸುವ 7ನೇ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಸಹಕಾರ ಸಂಘಗಳ ಆಡಳಿತ ಕುಸಿದಿರುವ ಬಗ್ಗೆ

523. ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ):– ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಹಕಾರ ಸಂಘಗಳ ಆಡಳಿತ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಅಂತಹ ಸಹಕಾರ ಸಂಘಗಳ ಆಡಳಿತ ಮಂಡಳಿಯನ್ನು ರದ್ದು ಪಡಿಸುವ ಉದ್ದೇಶ ಸರ್ಕಾರಕ್ಕಿದೆಯೇ? ಹಾಗೂ ಇದನ್ನು ಎಂದಿನಿಂದ ಜಾರಿಗೆ ತರಲಾಗುವುದು?

ಇ) ಸಹಕಾರ ಸಂಘಗಳ ಆಡಳಿತ ಮಂಡಳಿಯನ್ನು ರದ್ದುಪಡಿಸಿದರೆ ಆಡಳಿತಾಧಿಕಾರಿಗಳನ್ನು ನೇಮಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಕೆ.ಹೆಚ್. ಪಾಟೀಲ್ (ಸಹಕಾರ ಸಚಿವರು):–

ಅ) ಇಲ್ಲ.

ಆ) ನಿರ್ದಿಷ್ಟ ಆರೋಪಗಳಿಗೆ ಗುರಿಯಾದಂತಹ ಸಹಕಾರ ಸಂಘಗಳ ಆಡಳಿತ ಮಂಡಳಿಗಳನ್ನು ರದ್ದುಪಡಿಸಿ ಸಹಕಾರ ಸಂಘಗಳ ಕಾಯಿದೆ 1959ರ ಕಲಂ 30(1) ಹಾಗೂ 30ಎ ಅನ್ವಯ ಆಡಳಿತಾಧಿಕಾರಿ ಅಥವಾ ವಿಶೇಷಾಧಿಕಾರಿಯನ್ನು ನೇಮಿಸಲು ಅವಕಾಶವಿರುತ್ತದೆ. ಇಂತಹ ಕ್ರಮಗಳನ್ನು ಅಗತ್ಯವಿರುವ ಕಡೆ ಆಗಿಂದಾಗಲೇ ಜಾರಿಗೊಳಿಸಲಾಗುತ್ತದೆ.

ಇ) ಸಹಕಾರ ಸಂಘಗಳ ಆಡಳಿತ ಮಂಡಲಿಗಳನ್ನು ರದ್ದು ಪಡಿಸಿದ ಕಡೆ ಆಡಳಿತಾಧಿಕಾರಿಗಳನ್ನು ಆಗಿಂದಾಗಲೇ ನೇಮಿಸಲಾಗುತ್ತದೆ.

ಕೆರೆಗಳಲ್ಲಿ ಹೂಳು ತೆಗೆಯುವ ಬಗ್ಗೆ

522. ಎಲ್. ಆರ್. ಶಿವರಾಮೇಗೌಡ (ನಾಗಮಂಗಲ):– ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು, ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ದೊಡ್ಡ ಕೆರೆಗಳಲ್ಲಿ ಹೂಳು ತೆಗೆಯದೇ ಇರುವುದರಿಂದ ಅಚ್ಚುಕಟ್ಟುದಾರರಿಗೆ ತೊಂದರೆಯಾಗಿರುವ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ನಾಗಮಂಗಲ ತಾಲ್ಲೂಕಿನ ಸೂಳೆಕೆರೆ, ದಾಸನಕೆರೆ, ಬಿಂಡಿಗನಕೆರೆ, ದಿಡಗ ಕೆರೆ ಇವುಗಳಲ್ಲಿನ ಹೂಳು ತೆಗೆಯದೆ ಅಚ್ಚುಕಟ್ಟುದಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಬಂದಿದ್ದಲಿ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು?

ಇ) ಇದುವರೆವಿಗೂ ತೆಗೆದುಕೊಳ್ಳದಿದ್ದಲ್ಲಿ, ಇನ್ನು ಮುಂದಾದರೂ ರೈತರ ಹಿತದೃಷ್ಟಿಯಿಂದ ದೊಡ್ಡ ಕೆರೆಗಳ ಹೂಳು ತೆಗೆಯಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ, (ಸಣ್ಣ ನೀರಾವರಿ ರಾಜ್ಯ ಸಚಿವರು):–

ಅ) ಬಂದಿದೆ.

ಆ) ಈ ಕೆರೆಗಳ ಹೂಳನ್ನು ತೆಗೆಯುವ ಬಗ್ಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಇವುಗಳು ಪರಿಶೀಲನಾ ಹಂತದಲ್ಲಿದೆ.

ಇ) ಹಣಕಾಸಿನ ಪರಿಸ್ಥಿತಿ ನೋಡಿಕೊಂಡು ಪರಿಶೀಲಿಸಲಾಗುವುದು.

ರೈತರಿಗೆ ಗೊಬ್ಬರ ವಿತರಣೆ ಮಾಡುವ ಬಗ್ಗೆ

524 ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ):– ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ರೈತರಿಗೆ ಸರಿಯಾಗಿ ಗೊಬ್ಬರ ವಿತರಣೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಆಗ್ರೋ ಕೇಂದ್ರ ಮತ್ತು ಕರ್ನಾಟಕ ರಾಜ್ಯ ಮಾರ್ಕೆಟಿಂಗ್ ಫೆಡರೇಷನ್ ಇವೆರಡೂ ವ್ಯವಸ್ಥಿತವಾಗಿ ಗೊಬ್ಬರ ವಿತರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದರೆ ಈ ಬಗ್ಗೆ ಕೈಗೊಂಡ ಕ್ರಮಗಳಾವುವು)?

ಈ) ಮಂಡ್ಯ ಜಿಲ್ಲೆಯಲ್ಲಿ ಗೊಬ್ಬರ ವಿತರಣೆಯಾಗದಿರುವ ಬಗ್ಗೆ ಸರ್ಕಾರಕ್ಕೆ ಈಗಾಗಲೇ ಪತ್ರ ಬರೆದಿದ್ದು ಇದರ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಜಿ. ಪುಟ್ಟಸ್ವಾಮಿಗೌಡ, (ಕೃಷಿ ಮತ್ತು ತೋಟಗಾರಿಕೆ ಸಚಿವರು):–

ಅ) ರಾಜ್ಯದಲ್ಲಿ ರೈತರಿಗೆ ಅವಶ್ಯಕವಿದ್ದಷ್ಟು ಪೋಷಕಾಂಶಗಳನ್ನು ಒದಗಿಸುವ ರಸಗೊಬ್ಬರಗಳ ವಿತರಣೆ ಆಗುತ್ತಿದೆ.

ಆ) ಇಲ್ಲ. ಆದರೆ ಕಾಂಪ್ಲೆಕ್ಸ್ ರಸಗೊಬ್ಬರ ತಯಾರಕರು ಕಾಂಪ್ಲೆಕ್ಸ್ ಗೊಬ್ಬರವನ್ನು ಕೃಷಿ ಕೈಗಾರಿಕಾ ನಿಗಮ, ಮಾರಾಟ ಮಹಾ ಮಂಡಲಿ ಮತ್ತು ಖಾಸಗಿಯವರಿಗೆ ವಿತರಣೆ ಮಾಡುವಾಗ ಯೂರಿಯಾ ಮತ್ತು ಡಿ.ಎ.ಪಿ. ಜೊತೆ ಲಿಂಕ್ ಮಾಡಿ ಮಾರಾಟ ಮಾಡುತ್ತಿರುವುದು ಮತ್ತು ಇದೇ ಪದ್ಧತಿಯನ್ನು ಕೃಷಿ ಕೈಗಾರಿಕಾ ನಿಗಮ ಮತ್ತು ಮಾರಾಟ ಮಹಾ ಮಂಡಲಿಯವರು, ಸಹ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಇ) ಲಿಂಕ್ ಮಾಡಿ ಕಾಂಪ್ಲೆಕ್ಸ್ ಗೊಬ್ಬರ ಮಾರಾಟ ಮಾಡಬಾರದೆಂದು ಸಂಬಂಧಪಟ್ಟ ರಸಗೊಬ್ಬರ ತಯಾರಿಕೆಗೆ ಸೂಚನೆ ನೀಡಲಾಗಿದೆ.

ಈ) ಮಂಡ್ಯ ಜಿಲ್ಲೆಯಲ್ಲಿ ಫ್ಯಾಕ್ಟ್‌ಫಾಸ್ 20ಖ20ಖ0 ಕಾಂಪ್ಲೆಕ್ಸ್ ಗೊಬ್ಬರವನ್ನು ಯೂರಿಯಾ ಮತ್ತು ಡಿ.ಎ.ಪಿ. ಗೊಬ್ಬರಗಳ ಜೊತೆ ಲಿಂಕ್ ಮಾಡಿ ಮಾರಾಟ ಮಾಡುತ್ತಿರುವುದಾಗಿ ಮತ್ತು ರಸಗೊಬ್ಬರ ವಿತರಣೆ ಬಗ್ಗೆ ಚರ್ಚೆಸಲು ಶಾಸಕರು ಕರೆದಿರುವ ಸಭೆಗಳಿಗೆ ತಯಾರಿಕರು, ಕೃಷಿ ಕೈಗಾರಿಕಾ ನಿಗಮ, ಮತ್ತು ಮಾರಾಟ ಮಹಾ ಮಂಡಳಿಯವರು ಹಾಜರಾಗುತ್ತಿಲ್ಲವೆಂದು ದೂರುಗಳು ಬಂದಿವೆ. ಈಗಾಗಲೇ ಫ್ಯಾಕ್ಟ್‌ಫಾಸ್ ರಸಗೊಬ್ಬರವನ್ನು ಇತರೆ ಗೊಬ್ಬರಗಳ ಜೊತೆ ಲಿಂಕ್ ಮಾಡಿ ಮಾರಾಟ ಮಾಡಬಾರದೆಂದು ಮತ್ತು ಶಾಸಕರು ಕರೆಯುವ ಸಭೆಗಳಿಗೆ ತಪ್ಪದೆ ಹಾಜರಾಗಿ ರಸಗೊಬ್ಬರಗಳನ್ನು ಸಮರ್ಪಕವಾಗಿ ವಿತರಣೆ ಮಾಡುವಲ್ಲಿ ಸಹಕರಿಸಬೇಕೆಂದು ರಸಗೊಬ್ಬರ ತಯಾರಿಕರಿಗೆ ಸಹಕಾರ ಮಾರಾಟ ಮಂಡಲಿ ಮತ್ತು ಕೃಷಿ ಕೈಗಾರಿಕೆ ನಿಗಮದವರಿಗೆ ತಿಳಿಸಲಾಗಿದೆ.

ಗ್ರಾಮಾಂತರ ಪ್ರದೇಶದಲ್ಲಿ ವಿದ್ಯುತ್ ನಿಲುಗಡೆ ಬಗ್ಗೆ

525 ಶ್ರೀ ಎಲ್.ಆರ್ ಶಿವರಾಮೇಗೌಡ (ನಾಗಮಂಗಲ):– ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇತ್ತೀಚೆನ ದಿನಗಳಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ವಿದ್ಯುತ್ ನಿಲುಗಡೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹೊಸ ಸರ್ಕಾರ ಬಂದ ಮೇಲೆ ವಿದ್ಯುತ್ ಅಭಿವೃದ್ಧಿಗೆ ಕೈಗೊಂಡಿರುವ ಕಾರ್ಯಕ್ರಮಗಳೇನು?

ಇ) ನಾಗಮಂಗಲ ತಾಲ್ಲೂಕಿನಲ್ಲಿ ದಿನಕ್ಕೆ 6 ಘಂಟೆಗಳ ವಿದ್ಯುತ್ ನಿಲುಗಡೆ ಆಗುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?